**Akashvani : Bangalore**
**Regional Bulletin In Kannada**
**16.10.2025 / 6.40 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ಸರ್ಕಾರಿ ಸ್ಥಳಗಳಲ್ಲಿ ಖಾಸಗಿ ಸಂಘ ಸಂಸ್ಥೆಗಳ ಚಟುವಟಿಕೆಗೆ ನಿಷೇಧ; ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರ

೨. ಎಚ್‌ಎಂಟಿ, ಕುದುರೆಮುಖ ಅದಿರು ಕಾರ್ಖಾನೆ ಪುನರಾರಂಭಿಸಲು ಒತ್ತು - ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ

೩. ಬಳ್ಳಾರಿಯಲ್ಲಿ ಒಣಮೆಣಸಿನಕಾಯಿ ಸಂಸ್ಕರಣಾ ಘಟಕ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್

೪. ಮೈಸೂರಿನಲ್ಲಿ ನಾಳೆ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಬೃಹತ್ ಉದ್ಯೋಗ ಮೇಳ; ೨೪ ಸಾವಿರ ಅಭ್ಯರ್ಥಿಗಳಿಂದ ನೋಂದಣಿ

೫. ತಲಕಾವೇರಿಯಲ್ಲಿ ನಾಳೆ ಮಧ್ಯಾಹ್ನ ಕಾವೇರಿ ತೀರ್ಥೋದ್ಭವ - ಜಿಲ್ಲಾಡಳಿತ ಸಕಲ ಸಿದ್ಧತೆ

***************

ಸಂಘಟನೆಗಳು, ಖಾಸಗಿ ಸಂಘ ಸಂಸ್ಥೆಗಳು, ಸಾರ್ವಜನಿಕ ಸ್ಥಳಗಳಲ್ಲಿ ಚಟುವಟಿಕೆಗಳನ್ನು ಕಾನೂನು ಬದ್ಧವಾಗಿ ನಡೆಸಲು ಪೂರ್ವಾನುಮತಿ ಕಡ್ಡಾಯಗೊಳಿಸಲಾಗಿದೆ. ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಅನುಮತಿ ಇಲ್ಲದೆ ಕಾರ್ಯಕ್ರಮ ನಡೆಸಿದರೆ ಕ್ರಮ ಕೈಗೊಳ್ಳುವುದಾಗಿ ಕಾನೂನು ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.

****ಧ್ವನಿ ****ಎಚ್.ಕೆ. ಪಾಟೀಲ್

ಇದೇ ವೇಳೆ ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ ಸಹಾಯಕಿಯರಿಗೆ ಸಮವಸ್ತ್ರ ಸೀರೆಗಳನ್ನು ವಿತರಿಸಲು ೧೩ ಕೋಟಿ ೯೮ ಲಕ್ಷ ವೆಚ್ಚ ಮಾಡಲು ಸಂಪುಟ ಸಭೆಯಲ್ಲಿ

ನಿರ್ಧರಿಸಲಾಗಿದೆ. ಪ್ರತಿ ಅಂಗನವಾಡಿ ಕೇಂದ್ರಗಳಿಗೆ ಒಂದು ಸಾವಿರದ ೫೦೦ ರೂಪಾಯಿ ವೆಚ್ಚದಲ್ಲಿ ಔಷಧ ಕಿಟ್‌ಗಳ ವಿತರಣೆ ಮಾಡಲು ನಿರ್ಧರಿಸಲಾಗಿದೆ. ವಿಜಯಪುರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಮೈಸೂರಿನಲ್ಲಿ ನಿಮ್ಹಾನ್ಸ್ ಮಾದರಿ ಆಸ್ಪತ್ರೆ ನಿರ್ಮಾಣ, ಸಂಜಯ್ ಗಾಂಧಿ ಆಸ್ಪತ್ರೆಯಲ್ಲಿ ೨೭ ಕೋಟಿ ೬ ಲಕ್ಷ ಮೊತ್ತದ ಉಪಕರಣ ಖರೀದಿಗೆ ಒಪ್ಪಿಗೆ ಸೂಚಿಸಲಾಗಿದೆ. ವೃಷಭಾವತಿ ನದಿ ನೀರು ಮರು ಸಂಸ್ಕರಣೆ ಮೂಲಕ ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರದ ಕೆರೆಗಳಿಗೆ ೭೫೦ ಕೋಟಿ ರೂಪಾಯಿ ವೆಚ್ಚದಲ್ಲಿ ನೀರು ಪೂರೈಕೆಗೆ ಸಂಪುಟ ಒಪ್ಪಿಗೆ ಸೂಚಿಸಿದೆ.

***************

ರಾಜ್ಯದ ಪ್ರಮುಖ ಕಾರ್ಖಾನೆಗಳಾದ ಎಚ್.ಎಂ.ಟಿ ಹಾಗೂ ಕುದುರೆಮುಖ ಅದಿರು ಕಾರ್ಖಾನೆಯನ್ನು ಪುನರಾರಂಭಗೊಳಿಸುವ ನಿಟ್ಟಿನಲ್ಲಿ  ಕ್ರಮ ವಹಿಸಲಾಗಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯ ಜಿಲ್ಲೆ ಸೇರಿದಂತೆ ರಾಜ್ಯದ ಪ್ರಮುಖ ಕಡೆ ಕೈಗಾರಿಕೆ ಸ್ಥಾಪನೆಗೆ ಒತ್ತು ನೀಡಲಾಗುವುದು ಎಂದು ಹೇಳಿದ್ದಾರೆ. ರಾಜ್ಯ ಸರ್ಕಾರ ಎ ಖಾತಾ ನೆಪದಲ್ಲಿ ೧೫ ಸಾವಿರ ಕೋಟಿ ರೂಪಾಯಿ ಸುಲಿಗೆ ಮಾಡುತ್ತಿದೆ ಎಂದು ದೂರಿದ್ದಾರೆ.

**ಧ್ವನಿ** ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ

***************

ವಿತ್ತ ಸಚಿವೆ ಸಚಿವೆ ನಿರ್ಮಲಾ ಸೀತಾರಾಮನ್, ಬಳ್ಳಾರಿಯ ಕೊಡಂಚೆಗೇರಿ ಗ್ರಾಮ ಪಂಚಾಯಿತಿ ಗ್ರಂಥಾಲಯಕ್ಕೆ ಭೇಟಿ ನೀಡಿ, ವಿದ್ಯಾರ್ಥಿಗಳು ಹಾಗೂ ಶಿಕ್ಷಕರೊಂದಿಗೆ ಸಂವಾದ ನಡೆಸಿದರು. ಬಳಿಕ ಅವರು, ಸಿರಗುಪ್ಪ ತಾಲೂಕಿನ ಕುಂತಿಗೇರಿ ಗ್ರಾಮದಲ್ಲಿ ಒಣಮೆಣಸಿನಕಾಯಿ ಸಂಸ್ಕರಣಾ ಘಟಕವನ್ನು ಉದ್ಘಾಟಿಸಿದರು. ಕರ್ನಾಟಕ ಗ್ರಾಮೀಣ ಬ್ಯಾಂಕ್ ಅಧಿಕಾರಿಗಳೊಂದಿಗೂ ಅವರು ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ನಾಳೆ ಅವರು, ವಿಜಯನಗರದ ಕೂಡ್ಲಿಗಿಯಲ್ಲಿ, ರೈತ ತರಬೇತಿ ಕೇಂದ್ರ ಹಾಗೂ ಕೃಷಿ ಸಂಸ್ಕರಣ ಘಟಕವನ್ನು ಉದ್ಘಾಟಿಸಲಿದ್ದಾರೆ.

***************

ವಿಶ್ವ ಗುಣಮಟ್ಟ ದಿನದ ಅಂಗವಾಗಿ ಭಾರತೀಯ ಮಾಪಕ ಬ್ಯೂರೋ ಶಾಖಾ ಕಚೇರಿಯಿಂದ ಬೆಂಗಳೂರಿನಲ್ಲಿಂದು ಆಯೋಜಿಸಿದ್ದ ಕಾರ್ಯಕ್ರಮವನ್ನು ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಖಾತೆ  ರಾಜ್ಯ  ಸಚಿವೆ ಶೋಭಾ ಕರಂದ್ಲಾಜೆ ಉದ್ಘಾಟಿಸಿದರು. ಬಳಿಕ ಮಾತನಾಡಿದ

ಅವರು, ದೇಶಾದ್ಯಂತ ಮಾಪನ ಪ್ರಯೋಗಾಲಯ ಹೆಚ್ಚಿಸಲು ಕೇಂದ್ರ ಸರ್ಕಾರ ಚಿಂತನೆ ನಡೆಸಿದ್ದು, ಮಾಪನ ಕೇಂದ್ರಗಳಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಯ ನೇಮಕಕ್ಕೆ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು. ಸಂಸದ ಡಾ. ಸಿ.ಎನ್. ಮಂಜುನಾಥ್ ಮಾತನಾಡಿ, ಭಾರತೀಯ ರಫ್ತು ಪ್ರಮಾಣದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ವಲಯ ಶೇಕಡ ೪೦ ರಷ್ಟು ಕೊಡುಗೆ ನೀಡುತ್ತಿದೆ. ಭಾರತದ ಗುಣಮಟ್ಟದ ಪ್ರಮಾಣ, ಅಮೆರಿಕ, ಯುರೋಪಿಯನ್ ಒಕ್ಕೂಟಕ್ಕೆ ಸಮಾನವಾಗಿ ಬೆಳೆಯಬೇಕಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

***************

ರಾಜ್ಯದಲ್ಲಿ ಉದ್ಯೋಗ ಕ್ರಾಂತಿ ಉಂಟು ಮಾಡಲು ಸಂಕಲ್ಪ ತೊಟ್ಟಿರುವ ಕೌಶಲ್ಯಾಭಿವೃದ್ಧಿ ಇಲಾಖೆಯು ರಾಜ್ಯದ ವಿವಿಧ ಕಡೆಗಳಲ್ಲಿ ಉದ್ಯೋಗ ಮೇಳ ಆಯೋಜಿಸಿದ್ದು, ನಾಳೆ ಮೈಸೂರಿನಲ್ಲಿ "ಬೃಹತ್ ಉದ್ಯೋಗ ಮೇಳ" ನಡೆಯಲಿದೆ. ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯಲಿರುವ ಮೈಸೂರು ವಿಭಾಗ ಮಟ್ಟದ ಬೃಹತ್ ಉದ್ಯೋಗ ಮೇಳದಲ್ಲಿ ೨೪ ಸಾವಿರ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಮೇಳದಲ್ಲಿ ೨೨೧ ಕಂಪನಿಗಳು ಭಾಗವಹಿಸಲಿವೆ. ಉದ್ಯೋಗ ಮೇಳದ ಕುರಿತು ಮಾಹಿತಿ ಪಡೆದುಕೊಂಡಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ, ಸಚಿವ ಡಾ. ಶರಣಪ್ರಕಾಶ್ ಆರ್ ಪಾಟೀಲ್, ಆಕಾಂಕ್ಷಿಗಳಿಗೆ ಎಲ್ಲ ರೀತಿಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಸೂಚಿಸಿದ್ದಾರೆ. ಹೆಸರು ನೋಂದಾಯಿಸಿಕೊಂಡು ಉದ್ಯೋಗ ಮೇಳದಲ್ಲಿ ಭಾಗವಹಿಸಿದ ನಂತರ ಉದ್ಯೋಗ ಸಿಗದೇ ಇರುವ ಅಭ್ಯರ್ಥಿಗಳ ವಿವರವನ್ನು ಪಡೆದುಕೊಂಡು ಅವರಿಗೆ ಬೇಕಿರುವ ಕೌಶಲ್ಯಗಳ ಬಗ್ಗೆ ತರಬೇತಿ ನೀಡಲಾಗುವುದು ಎಂದು ಹೇಳಿದ್ದಾರೆ.

***************

ಕಾವೇರಿ ಉಗಮ ತಾಣವಾದ ಕೊಡಗಿನ ಬ್ರಹ್ಮಗಿರಿ ತಪ್ಪಲಿನ ತಲಕಾವೇರಿಯಲ್ಲಿ ನಾಳೆ ಕಾವೇರಿ ತೀರ್ಥೋದ್ಭವ ಜರುಗಲಿದ್ದು ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ನಾಳೆ ಮಧ್ಯಾಹ್ನ ೧ ಗಂಟೆ ೪೪ ನಿಮಿಷಕ್ಕೆ ಮಕರ ಲಗ್ನದಲ್ಲಿ ಕಾವೇರಿ ತೀರ್ಥರೂಪಿಣಿಯಾಗಿ ಉದ್ಭವಿಸಲು ಮುಹೂರ್ತ ನಿಗದಿಯಾಗಿದೆ. ಕಾವೇರಿ ಮತ್ತು ಭಗಂಡ ಕ್ಷೇತ್ರದಲ್ಲಿ ಸ್ವಚ್ಛತಾ ಕಾರ್ಯಗಳು ಸಮಾರೋಪಾದಿಯಲ್ಲಿ ನಡೆದಿವೆ. ಈ ವರ್ಷ ಮಧ್ಯಾಹ್ನ ಸಮಯದಲ್ಲಿ ತೀರ್ಥೋದ್ಭವ

ಜರುಗಲಿರುವುದರಿಂದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ನಿರೀಕ್ಷೆಯಿದೆ. ಹೀಗಾಗಿ ಕೊಡಗು ಜಿಲ್ಲಾಡಳಿತದಿಂದ ಪೂರ್ವ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟ್‌ರಾಜಾ ತಿಳಿಸಿದ್ದಾರೆ.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹಾಡೋನಹಳ್ಳಿ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದಲ್ಲಿ 'ಉತ್ತಮ ಆಹಾರ ಮತ್ತು ಉತ್ತಮ ಭವಿಷ್ಯಕ್ಕಾಗಿ ಕೈಜೋಡಿಸಿ' ಧ್ಯೇಯ ವಾಕ್ಯದೊಂದಿಗೆ ವಿಶ್ವ ಆಹಾರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ  ಡಾ. ಬಿ.ಜಿ. ಹನುಮಂತರಾಯ ಮಾತನಾಡಿ, ಆಹಾರದಲ್ಲಿ ಮೂರನೇ ಒಂದು ಭಾಗ ವ್ಯರ್ಥವಾಗಿ ಪೋಲಾಗುತ್ತಿದೆ. ಇದನ್ನುತಡೆಗಟ್ಟಲು ಎಲ್ಲರೂ ಕೈಜೋಡಿಸಿ ಕೆಲಸ ಮಾಡಬೇಕಿದೆ ಎಂದು ಕರೆ ನೀಡಿದ್ದಾರೆ.  ಇನ್ನೊಂದೆಡೆ ದೊಡ್ಡಬಳ್ಳಾಪುರದ ಗ್ರಾಮೀಣ ಅಭ್ಯುದಯ ಸೇವಾ ಸಂಸ್ಥೆಯಲ್ಲಿ ಇಂದು ವಿಶ್ವ ಆಹಾರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

***************

ನೈಸರ್ಗಿಕ ವಿಪತ್ತು ನಿರ್ವಹಣೆ ಸಂದರ್ಭಗಳಲ್ಲಿ ಯುವ ಸಮುದಾಯದ ಪಾತ್ರ ಮುಖ್ಯವಾದದ್ದು ಎಂದು  ಕರ್ನಾಟಕ ರಾಜ್ಯ ಸ್ಕೌಟ್ಸ್ ಅಂಡ್ ಗೈಡ್ಸ್ ಮುಖ್ಯ ಆಯುಕ್ತ ಪಿ.ಜಿ.ಆರ್ ಸಿಂಧ್ಯಾ ತಿಳಿಸಿದ್ದಾರೆ. ದೊಡ್ಡಬಳ್ಳಾಪುರದ ಅನಿಬೆಸೆಂಟ್ ಪಾರ್ಕ್ ನಲ್ಲಿ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ವತಿಯಿಂದ ಯುವ ಅಪಾಯ ಮಿತ್ರ ಯೋಜನೆಯಡಿಯಲ್ಲಿ ಆಯೋಜಿಸಿದ್ದ ಸ್ವಯಂ ಸೇವಕರಿಗೆ ವಿಪತ್ತು ನಿರ್ವಹಣಾ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ವಿಪತ್ತು ನಿರ್ವಹಣೆಗೆ ಪೂರಕವಾದ ತರಬೇತಿ ಪಡೆಯುವ ಅವಶ್ಯಕತೆಯಿದ್ದು, ಸ್ಕೌಟ್ಸ್ ಅಂಡ್ ಗೈಡ್ಸ್ ವತಿಯಿಂದ ಯುವ ಅಪಾಯ ಮಿತ್ರ ಯೋಜನೆ ಅಡಿಯಲ್ಲಿ ತರಬೇತಿ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ.

***************

ಗರ್ಭಪೂರ್ವ ಮತ್ತು ಪ್ರಸವಪೂರ್ವ ಭ್ರೂಣಲಿಂಗ ಪತ್ತೆ ನಿಷೇಧ ಕಾಯ್ದೆ ಅನ್ವಯ ಭ್ರೂಣಲಿಂಗ ಪತ್ತೆ ಮತ್ತು ಭ್ರೂಣಲಿಂಗ ಆಯ್ಕೆಗೆ ಅವಕಾಶವಿಲ್ಲ ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯಾರಾದರೂ ಕಾನೂನು ಬಾಹಿರವಾಗಿ

ನಡೆದುಕೊಂಡಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಚ್ಚರಿಕೆ ನೀಡಿದ್ದಾರೆ. ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮದಡಿ ಜಿಲ್ಲೆಯ ಎಲ್ಲಾ ಆಡಳಿತ ವೈದ್ಯಾಧಿಕಾರಿಗಳು ಗಂಭೀರ ಸಮಸ್ಯೆ ಇರುವ ಗರ್ಭಿಣಿಯರನ್ನು ಗುರುತಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

***************

ಉತ್ತರ ಕನ್ನಡ ಜಿಲ್ಲೆಯಲ್ಲಿ ಸಂಭವಿಸುವ ಜನನ ಮತ್ತು ಮರಣದ ನೊಂದಣಿಯನ್ನು ೨೧ ದಿಗಳ ಒಳಗೆ ಕಡ್ಡಾಯವಾಗಿ ನೊಂದಣಿ ಮಾಡಬೇಕು ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚಿಸಿದ್ದಾರೆ. ಜಿಲ್ಲಾ ಮಟ್ಟದ ಜನನ ಮರಣ ನೊಂದಣಿ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ನಿಗದಿತ ಅವಧಿಯ ಕುರಿತಂತೆ ಸಾರ್ವಜನಿಕರಲ್ಲಿ ವ್ಯಾಪಕ ಅರಿವು ಮೂಡಿಸಲು ಕ್ರಮ ಕೈಗೊಳ್ಳಬೇಕು. ಮರಣ ಕಾರಣದ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ನೀಡುವ ಕುರಿತಂತೆ ಆರೋಗ್ಯ ಇಲಾಖೆಯ ಮೂಲಕ ಜಿಲ್ಲೆಯಲ್ಲಿನ ಎಲ್ಲಾ ಆಸ್ಪತ್ರೆಗಳಿಗೆ ನಿರ್ದೇಶನ ನೀಡಬೇಕು ಎಂದು ತಿಳಿಸಿದ್ದಾರೆ.

***************

ರಸ್ತೆಗುಂಡಿಗಳನ್ನು ತ್ವರಿತವಾಗಿ ಮುಚ್ಚಿ ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ಸೂಚಿಸಿದ್ದಾರೆ. ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಪೊಲೀಸ್ ಇಲಾಖೆ ಗುರುತಿಸಿರುವ ಅಪಘಾತ ಮತ್ತು ಸೂಕ್ಷ್ಮ ವಲಯಗಳನ್ನು ಅಭಿವೃದ್ಧಿಪಡಿಸಬೇಕು. ರಸ್ತೆಯ ತಿರುವುಗಳಲ್ಲಿ ಅಗತ್ಯ ಸಂಚಾರಿ ಹಾಗೂ ಸೂಚನಾ ಫಲಕ ಅಳವಡಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

***************

ಯುವಕರು ದೇಶದ ಶಕ್ತಿ ಮತ್ತು ಭವಿಷ್ಯ ಎಂದು ಧಾರವಾಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಹೇಳಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಜಿಲ್ಲಾ ಯುವಜನೋತ್ಸವ ಉದ್ಘಾಟಿಸಿ, ಮಾತನಾಡಿದ ಅವರು, ಸಮಾಜದ ಪ್ರಗತಿ ಯುವ ಪೀಳಿಗೆಯ ಚಿಂತನೆ ಮತ್ತು ನೈತಿಕತೆಗೆ ಅವಲಂಬಿತವಾಗಿದೆ ಅವರು ತಿಳಿಸಿದ್ದಾರೆ.

***************

ಪ್ರತಿ ಮನೆಯಲ್ಲಿಯೂ ಸ್ವದೇಶಿ ವಸ್ತುಗಳ ಬಳಕೆ ಆಗಬೇಕು. ಈ ನಿಟ್ಟಿನಲ್ಲಿ ಆತ್ಮ ನಿರ್ಭರ ಭಾರತ ಸಂಕಲ್ಪದ ಅಂಗವಾಗಿ ಸ್ವದೇಶಿ ಉತ್ಪನ್ನಗಳನ್ನು ಬಳಸಿ ಎಂಬ ಅಭಿಯಾನವನ್ನು ಸೆಪ್ಟೆಂಬರ್ ೨೫ ರಿಂದ ಡಿಸೆಂಬರ್ ೨೫ ರವರೆಗೆ ಬಳ್ಳಾರಿ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ವಿಧಾನಪರಿಷತ್ ಸದಸ್ಯ ವೈ. ಎಂ. ಸತೀಶ್ ತಿಳಿಸಿದ್ದಾರೆ. ಬಳ್ಳಾರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಅಭಿಯಾನವು ಸಾಮಾನ್ಯ ನಾಗರಿಕರ ಪಾಲ್ಗೊಳ್ಳುವಿಕೆ ಬಗ್ಗೆ ಜನಜಾಗೃತಿ ಮೂಡಿಸಿ, ಪ್ರತಿಯೊಬ್ಬ ಭಾರತೀಯನಿಗೂ ಆತ್ಮನಿರ್ಭರ ಭಾರತ ಸಂದೇಶ ತಲುಪಿಸಲಿದೆ ಎಂದು ಹೇಳಿದ್ದಾರೆ.

***************